## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 231 |
| ಸದಸ್ಯರ ಹೆಸರು | ಶ್ರೀ ಬಿ.ಜಿ. ಪಾಟೀಲ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 10.12.2024 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

<table>
<tr><th>ಕ್ರ.<br>ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಪರವಾನಗಿ ಪಡೆದು ಕಲ್ಲು ಗಣಿಗಾರಿಕೆ ಮತ್ತು ಮರಳುಗಾರಿಕೆ ನಡೆಸುತ್ತಿರುವವರ ಸಂಖ್ಯೆ ಎಷ್ಟು; ಈ ಪರವಾನಗಿ ಪಡೆಯಲು ಸರ್ಕಾರ ನಿಗದಿಪಡಿಸಿರುವ ಮಾನದಂಡಗಳೇನು ಮತ್ತು ಇವುಗಳಿಂದ ಸರ್ಕಾರಕ್ಕೆ ಪ್ರತಿ ವರ್ಷ ಎಷ್ಟು ರಾಜಸ್ವ ಬರುತ್ತಿದೆ; (ವಿವರ ಒದಗಿಸುವುದು)</td><td>ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಪರವಾನಿಗೆ ಪಡೆದು ಕಲ್ಲು ಗಣಿಗಾರಿಕೆ ಮತ್ತು ಮರಳು ಗಣಿಗಾರಿಕೆ ನಡೆಸುತ್ತಿರುವವರ ವಿವರ ಕೆಳಕಂಡಂತಿದೆ:
<table>
<tr><th>ಕ್ರ.<br>ಸಂ</th><th>ಜಿಲ್ಲೆ</th><th>ಕಲ್ಲು ಗಣಿ ಗುತ್ತಿಗೆಗಳ ಸಂಖ್ಯೆ</th><th>ಮರಳು ಗಣಿ ಗುತ್ತಿಗೆಗಳ ಸಂಖ್ಯೆ</th></tr>
<tr><td>1</td><td>ಕಲಬುರಗಿ</td><td>282</td><td>14</td></tr>
<tr><td>2</td><td>ಯಾದಗಿರಿ</td><td>31</td><td>04</td></tr>
</table>
<ul>
<li>ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957 ರ ಕಲಂ 15 ರಲ್ಲಿ ರಾಜ್ಯ ಸರ್ಕಾರಗಳಿಗೆ ನೀಡಿರುವ ಅಧಿಕಾರದನ್ವಯ ರಾಜ್ಯದಲ್ಲಿ ಉಪಖನಿಜಗಳ ಗಣಿಗಾರಿಕೆಗೆ ಗುತ್ತಿಗೆ ಮಂಜೂರಾತಿ ನಿಯಂತ್ರಣ ಕುರಿತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ನ್ನು ಜಾರಿಗೆ ತರಲಾಗಿದೆ. ಸದರಿ ನಿಯಮಗಳಂತೆ ಉಪಖನಿಜಗಳ ಗಣಿಗಾರಿಕೆಗೆ ಗುತ್ತಿಗೆಗಳನ್ನು ಪಡೆಯುವುದು ಕಡ್ಡಾಯವಾಗಿರುತ್ತದೆ.</li>
<li>ಸರ್ಕಾರಿ ಜಮೀನುಗಳಲ್ಲಿ ಲಭ್ಯವಿರುವ ಉಪಖನಿಜ ನಿಕ್ಷೇಪಗಳನ್ನು ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ಗುರುತಿಸಿ, ಕಂದಾಯ ಮತ್ತು ಅರಣ್ಯ ಇಲಾಖೆಯಿಂದ ನಿರಾಕ್ಷೇಪಣಾ ಪತ್ರಗಳನ್ನು ಪಡೆದ ನಂತರ ಅಧಿಸೂಚನೆ ಜಾರಿ ಮಾಡಬೇಕಾಗಿರುತ್ತದೆ. ನಂತರ ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ) ಸಮಿತಿಯಿಂದ, ಗುರುತಿಸಿರುವ ಉಪಖನಿಜದ ನಿಕ್ಷೇಪದ ಪ್ರದೇಶದಲ್ಲಿ ಗಣಿಗಾರಿಕೆ ನಡೆಸಲು ಟೆಂಡರ್ ಕಂ ಹರಾಜು ಪ್ರಕ್ರಿಯೆ ಕೈಗೊಂಡು ನಿರ್ದಿಷ್ಟ ಉಪಖನಿಜಗಳಿಗೆ ಸರ್ಕಾರದಿಂದ ಮತ್ತು ನಿರ್ದಿಷ್ಟವಲ್ಲದ ಉಪಖನಿಜಗಳಿಗೆ ಸಂಬಂಧಿಸಿದಂತೆ ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ ಇವರಿಂದ ಬಿಡ್ ಸ್ಥಿರೀಕರಿಸಿಕೊಂಡ ನಂತರ ಯಶಸ್ವಿ ಬಿಡ್ದುದಾರರಿಂದ ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದು ಗುತ್ತಿಗೆಯನ್ನು ಮಂಜೂರು ಮಾಡಲಾಗುತ್ತದೆ.</li>
</ul></td></tr>
</table>

- ದಿನಾಂಕ 17.03.2023 ರಂದು ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2023 ನ್ನು ಜಾರಿಗೆ ತಂದಿದ್ದು, ಅದರಲ್ಲಿ, ದಿನಾಂಕ 12.08.2016ರ ಪೂರ್ವದಲ್ಲಿ ಕಲ್ಲು ಗಣಿ ಗುತ್ತಿಗೆ ಮಂಜೂರಾತಿ ಕೋರಿ ಸಲ್ಲಿಸಿದ್ದ ಅರ್ಜಿಗಳನ್ನು ಪರಿಗಣಿಸಲಾಗಿದ್ದು, ಸದರಿ ಅರ್ಜಿಗಳ ಪ್ರದೇಶಕ್ಕೆ ಕಂದಾಯ ಮತ್ತು ಅರಣ್ಯ ಇಲಾಖೆಯಿಂದ ನಿರಾಕ್ಷೇಪಣಾ ಪತ್ರಗಳನ್ನು ಹಾಗೂ ವರದಿಗಳನ್ನು ಪಡೆದ ನಂತರ, ಕಲ್ಲುಗಣಿ ಗುತ್ತಿಗೆ ಮಂಜೂರಾತಿಗೆ ಕ್ರಮ ವಹಿಸಬೇಕಾಗಿರುತ್ತದೆ.
- ಪಟ್ಟಾ ಜಮೀನುಗಳಲ್ಲಿ ಕಲ್ಲು ಮತ್ತು ಮರಳು ಗಣಿಗಾರಿಕೆ ನಡೆಸಲು ಪಟ್ಟಾದಾರರಿಗೆ ಅಥವಾ ಪಟ್ಟಾದಾರರು ಒಪ್ಪಿಗೆ ನೀಡುವ ವ್ಯಕ್ತಿಗಳಿಗೆ ಕಂದಾಯ ಮತ್ತು ಅರಣ್ಯ ಇಲಾಖೆಯ ನಿರಾಕ್ಷೇಪಣಾ ಪತ್ರಗಳು, ಭೂಪರಿವರ್ತನೆ ಆದೇಶ, ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದು, ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ) ಸಮಿತಿಯಲ್ಲಿ ಮಂಡಿಸಿ, ಅನುಮೋದನೆ ಪಡೆದು ಸಂಬಂಧಪಟ್ಟ ಜಿಲ್ಲೆಯ ಉಪ ನಿರ್ದೇಶಕರು / ಹಿರಿಯ ಭೂವಿಜ್ಞಾನಿ ರವರಿಂದ ಕಲ್ಲು ಗಣಿಗಾರಿಕೆಗೆ ಲೈಸೆನ್ಸ್ ನೀಡಲಾಗುತ್ತಿದೆ.
- I, II ಮತ್ತು IIIನೇ ಶ್ರೇಣಿಯ ಹಳ್ಳ ಮತ್ತು ತೊರೆಗಳಲ್ಲಿ ಸಂಬಂಧಪಟ್ಟ ಗ್ರಾಮ ಪಂಚಾಯಿತಿಯಿಂದ ಮರಳನ್ನು ತೆಗೆಯಲು ಅವಕಾಶ ಕಲ್ಪಿಸಿದೆ.
- IV, V ಹಾಗೂ ಉನ್ನತ ಶ್ರೇಣಿಯ ನದಿ ಪಾತ್ರಗಳಲ್ಲಿ ಸರ್ಕಾರದಿಂದ ಮರಳು ಗಣಿಗಾರಿಕೆ ನಡೆಸಲು ಅಧಿಸೂಚಿಸುವ ಸರ್ಕಾರದ ಅಧೀನದ ನಿಗಮ ಮತ್ತು ಮಂಡಳಿಗೆ ಹರಾಜು ರಹಿತವಾಗಿ ಹಾಗೂ ಟೆಂಡರ್ ಮೂಲಕ ಮರಳು ಗಣಿಗಾರಿಕೆಗೆ ಸಾರ್ವಜನಿಕರಿಗೆ ಗುತ್ತಿಗೆಗಳನ್ನು ಮಂಜೂರು ಮಾಡಲಾಗುತ್ತದೆ.
- ಕಲ್ಲುಗಣಿ ಮತ್ತು ಮರಳು ಗಣಿ ಗುತ್ತಿಗೆಗಳನ್ನು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994ರ ನಮೂನೆ-ಇ ರಲ್ಲಿನ ಗುತ್ತಿಗೆ ಕರಾರು, ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರದಲ್ಲಿನ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ನೀಡಲಾಗುತ್ತಿದೆ.
- ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಕಳೆದ ನಾಲ್ಕು ವರ್ಷಗಳಲ್ಲಿ ಮಂಜೂರು ಮಾಡಿರುವ ಕಲ್ಲು ಮತ್ತು ಮರಳು ಗಣಿ ಗುತ್ತಿಗೆಗಳಿಂದ ಸರ್ಕಾರಕ್ಕೆ ಸಂಗ್ರಹವಾಗಿರುವ ರಾಜಧನದ ವಿವರ ಕೆಳಕಂಡಂತಿದೆ:

**ಕಲಬುರಗಿ ಜಿಲ್ಲೆ**

(₹ಲಕ್ಷಗಳಲ್ಲಿ)

| ಕ್ರ ಸಂ. | ವರ್ಷ | ಕಲ್ಲುಗಣಿ ಗುತ್ತಿಗೆ | ಮರಳು ಗಣಿ ಗುತ್ತಿಗೆ |
|---|---|---|---|
| 1 | 2020-21 | 254.30 | 294.99 |
| 2 | 2021-22 | 261.34 | 440.15 |
| 3 | 2022-23 | 398.49 | 1090.72 |
| 4 | 2023-24 | 479.36 | 2419.68 |

<table>
<tr><td></td><td></td><td>ಯಾದಗಿರಿ ಜಿಲ್ಲೆ<br>(₹ಲಕ್ಷಗಳಲ್ಲಿ)
<table>
<tr><th>ಕ್ರ. ಸಂ</th><th>ವರ್ಷ</th><th>ಕಲ್ಲುಗಣಿ ಗುತ್ತಿಗೆ</th><th>ಮರಳು ಗಣಿ ಗುತ್ತಿಗೆ</th></tr>
<tr><td>1</td><td>2020-21</td><td>56.75</td><td>506.73</td></tr>
<tr><td>2</td><td>2021-22</td><td>119.48</td><td>102.79</td></tr>
<tr><td>3</td><td>2022-23</td><td>106.18</td><td>217.38</td></tr>
<tr><td>4</td><td>2023-24</td><td>230.27</td><td>604.83</td></tr>
</table>
</td></tr>
<tr><td>ಆ)</td><td>ಸದರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಪರವಾನಗಿದಾರರು ಪ್ರತಿ ವರ್ಷ ಸರ್ಕಾರಕ್ಕೆ ತೆರಿಗೆಯನ್ನು ಪಾವತಿಸಿದ್ದಾರೆಯೇ; ಹಾಗೂ ತೆರಿಗೆ ಬಾಕಿ ಏನಾದರೂ ಇದೆಯೇ; ಇದ್ದಲ್ಲಿ ಸಂಪೂರ್ಣ ವಿವರ ನೀಡುವುದು;</td><td>ಹೌದು.<br>2023-24 ನೇ ಸಾಲಿನ ಬಾಕಿ ಬೇಡಿಕೆ ಮತ್ತು ಸಂಗ್ರಹಣೆ ತಃಖ್ತೆಯಂತೆ, ಕಲಬುರಗಿ ಜಿಲ್ಲಾ ವ್ಯಾಪ್ತಿಯಲ್ಲಿ ಚಾಲ್ತಿ ಉಪಖನಿಜ ಗಣಿ ಗುತ್ತಿಗೆದಾರರಿಂದ ₹9.24 ಕೋಟಿಗಳು ಹಾಗೂ ಯಾದಗಿರಿ ಜಿಲ್ಲೆಯಲ್ಲಿ ₹51.00 ಕೋಟಿಗಳ ರಾಜಧನ ಬಾಕಿ ಇರುತ್ತದೆ.</td></tr>
<tr><td>ಇ)</td><td>ಬಾಕಿ ಉಳಿಸಿಕೊಂಡಿರುವ ತೆರಿಗೆಯನ್ನು ಯಾವ ಕಾಲಮಿತಿಯೊಳಗೆ ವಸೂಲಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದು?</td><td>ಬಾಕಿ ಪಾವತಿಸಬೇಕಾದ ಕಲ್ಲುಗಣಿ ಗುತ್ತಿಗೆದಾರರಿಗೆ ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994ರ ನಿಯಮ 39 ರಂತೆ 60 ದಿನಗಳೊಳಗಾಗಿ ಬಾಕಿ ಪಾವತಿಸುವಂತೆ ನೋಟೀಸ್ ಜಾರಿ ಮಾಡಿ, ಸದರಿ ಅವಧಿಯೊಳಗಾಗಿ ಬಾಕಿ ಪಾವತಿಯಾಗದಿದ್ದಲ್ಲಿ ಭೂಕಂದಾಯದಂತೆ ಸಂಗ್ರಹಣೆಗೆ ಕ್ರಮ ವಹಿಸಲಾಗುತ್ತಿದೆ.</td></tr>
</table>

ಸಂಖ್ಯೆ: ಸಿಐ -ಎಂಎಂಎನ್/293/2024

**(ಎಸ್.ಎಸ್.ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.